ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

2

ಇಲಾಖೆ / ವಿಷಯ : DEPARTMENT / SUBJECT: ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್

ಪತ್ರಿಕೆಯ ಹೆಸರು : NAME OF THE NEWS PAPER: ಸಂಯುಕ್ತ ಕರ್ನಾಟಕ ದಿನಾಂಕ : DATE : 17/2/20

# ತಾಲ್ಲೂಕು ಪಂಚಾಯ್ತಿ ರದ್ದು : ಅಧಿವೇಶನದಲ್ಲಿ ಚರ್ಚೆ

**ಬೆಂಗಳೂರು:** ತಾಲ್ಲೂಕು ಪಂಚಾಯ್ತಿ ರದ್ಧತಿ ಕುರಿತು ಮುಂದಿನ ಅಧಿವೇಶನದಲ್ಲಿ ಚರ್ಚೆ ನಡೆಸಿ ನಿರ್ಧಾರ ಮಾಡಲಾಗುವುದು ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಇಲಾಖೆ ಸಚಿವ ಕೆ.ಎಸ್. ಈಶ್ವರಪ್ಪ ಹೇಳಿದ್ದಾರೆ.

ಗ್ರಾಮ ಪಂಚಾಯ್ತಿಯ ನೂತನ ಸದಸ್ಯರಿಗೆ ಸಾಮರ್ಥ್ಯಾಭಿವೃದ್ಧಿ ಕಾರ್ಯಕ್ರಮ ಉದ್ಘಾಟಿಸಿದ ನಂತರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ತಾಲ್ಲೂಕು ಪಂಚಾಯ್ತಿಗಳು ಉಪಯೋಗವಿಲ್ಲ ಎಂಬ ಅಭಿಪ್ರಾಯ ಎಲ್ಲೆಡೆ ವ್ಯಕ್ತವಾಗಿದೆ. ಪಂಚಾಯತ್ ರಾಜ್ ವ್ಯವಸ್ಥೆಯಲ್ಲಿ ಗ್ರಾಪಂ ಮತ್ತು ಜಿಪಂ ಎರಡೇ ಸಾಕು ಎಂಬ ಅಭಿಪ್ರಾಯವಿದೆ. ಏಕಾಏಕಿ ತಾಪಂ ರದ್ದುಮಾಡಲು ಸಾಧ್ಯವಿಲ್ಲ. ಸಂವಿಧಾನಕ್ಕೆ ತಿದ್ದುಪಡಿ ಆಗಬೇಕಿದೆ. ತಾಪಂ ರದ್ಧತಿ ಬಗ್ಗೆ ವಿಧಾನಮಂಡಲ ಅಧಿವೇಶನದಲ್ಲಿ ಚರ್ಚಿಸಿ ನಿರ್ಣಯ ಕೈಗೊಂಡು ಕೇಂದ್ರ ಸರ್ಕಾರಕ್ಕೆ ಕಳುಹಿಸಿಕೊಡಲಾಗುವುದು. ನಂತರ ಕೇಂದ್ರ ಸರ್ಕಾರ ಎಲ್ಲಾ ರಾಜ್ಯಗಳ ಅಭಿಪ್ರಾಯ ಪಡೆದು ತೀರ್ಮಾನ ಕೈಗೊಳ್ಳಬೇಕಾಗುತ್ತದೆ ಎಂದು ಹೇಳಿದರು. ಜಿಲ್ಲಾ ಹಾಗೂ ತಾಲ್ಲೂಕು ಪಂಚಾಯ್ತಿಗಳಿಗೆ ಚುನಾವಣೆ ಖಂಡಿತವಾಗಿಯೂ ನಡೆಯುತ್ತದೆ. ಅವಧಿ ಮುಗಿದಿರುವ ಎರಡೂ ಪಂಚಾಯ್ತಿಗಳಿಗೆ ಏಪ್ರಿಲ್‌ನಲ್ಲಿ ಚುನಾವಣೆ ನಡೆಯಬಹುದು. ತಾಲ್ಲೂಕು ಪಂಚಾಯ್ತಿ ರದ್ಧತಿಗೂ ಚುನಾವಣೆಗಳಿಗೂ ಯಾವುದೇ ಸಂಬಂಧವಿಲ್ಲ ಎಂದು ಅವರು ಸ್ಪಷ್ಟಪಡಿಸಿದರು.